ಇ) ಪ್ರಸ್ತುತ ಸಾಲಿನಲ್ಲಿ ನಾಲ್ಕನೆಯ ಹಂತದ ಸೇತುವೆಯ ನಿರ್ಮಾಣಕ್ಕಾಗಿ ವೆಚ್ಚಮಾಡಲಿರುವ ಹಣ ರೂ. 3870.00 ಲಕ್ಷಗಳು. ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ. ಇಲ್ಲಿಯವರೆಗೆ ಯಾವುದೇ ಹಣ ಬಿಡುಗಡೆಯಾಗಿರುವುದಿಲ್ಲ.

ಪ್ರಶ್ನೆ ಸಂಖ್ಯೆ : 61(219) ಶ್ರೀ ಮೀರಾಜುದ್ದೀನ್ ಪಟೇಲ್ (ಹುಮ್ನಾಬಾದ್)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಹಿಂದಿನ ಸರ್ಕಾರದ ಅವಧಿಯಲ್ಲಿ 24 ಜನ ಗುತ್ತಿಗೆ ನೌಕರರನ್ನು ಸೇವೆಯಲ್ಲಿ ಖಾಯಂ ಮಾಡುವಾಗ, ಹೊರಡಿಸಿದ್ದ ಡ್ರಾಫ್ಟ್‌ರೂಲ್ಸ್‌ಗೆ ಆಕ್ಷೇಪಣೆಗಳನ್ನು ಸಕಾಲದಲ್ಲಿ ಸಲ್ಲಿಸಿ, ಸ್ವೀಕೃತಿಯನ್ನು ಪಡೆದಿದ್ದರೂ, ಆಕ್ಷೇಪಣೆಗಳ ಬಗ್ಗೆ ಕ್ರಮ ಕೈಗೊಳ್ಳದೆ ತಟಸ್ಥರಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆರವರಿಂದ ಕೆಲವು ನೌಕರರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) 24 ಜನ ನೌಕರರನ್ನು ಖಾಯಂ ಮಾಡುವಾಗ ಅವರುಗಳು ಪ್ರಕರಣವು ನ್ಯಾಯಾಲಯದಲ್ಲಿದ್ದರೂ ಅವರುಗಳ ಕಡತವನ್ನು ಸಚಿವ ಸಂಪುಟಕ್ಕೆ ಮಂಡಿಸಿದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಈ ನೌಕರರ ಕಡತವನ್ನು ಮಂಡಿಸಲು ಆದೇಶಿಸಿದ್ದರೂ, ಪ್ರಕರಣ ನ್ಯಾಯಾಲಯದಲ್ಲಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹೇಳುವುದು ತಪ್ಪಲ್ಲವೇ;

ಇ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಕೆ ಉದ್ದೇಶ ಪೂರ್ವಕವಾಗಿ ಈ ರೀತಿ ತಪ್ಪು ಮಾಹಿತಿ ನೀಡಿದ್ದರಿಂದ, ಇವರುಗಳು ನೊಂದು ನ್ಯಾಯಾಲಯದ ಮೊರೆ ಹೋಗಿರುತ್ತಾರೆ. ಈ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರು 24 ಜನ ನೌಕರರ ಪ್ರಕರಣದಲ್ಲಿ ಕ್ರಮ ಕೈಗೊಂಡಂತೆ ಇವರ ವಿಷಯದಲ್ಲೂ ಸರ್ಕಾರದ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ಡಿ.ಕುಮಾರಸ್ವಾಮಿ

ಅ) ಕರಡು ನಿಯಮಾವಳಿಗಳಿಗೆ ಬಂದ ಎಲ್ಲಾ ಆಕ್ಷೇಪಣೆಗಳನ್ನು

ಪರಿಶೀಲಿಸಿದ ನಂತರ ಕರಡು ನಿಯಮಾವಳಿಯನ್ನು ಅಂತಿಮಗೊಳಿಸಿ ನಿಯಮಾವಳಿಯ ಷರತ್ತುಗಳನ್ನು ಪೂರೈಸಿದ 24 ಜನರ ಸೇವೆಯನ್ನು ಖಾಯಂಗೊಳಿಸಲಾಗಿದೆ.

ಆ) ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಕೆಲವು ನೌಕರರು ಸದರಿ ನೇಮಕಾತಿಯ ನಿಯಮಗಳ ಅನುಬಂಧವನ್ನು ರದ್ದುಪಡಿಸುವಂತೆ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿಯನ್ನು ದಾಖಲಿಸಿರುತ್ತಾರೆ. ಈ ಬಗ್ಗೆ ನ್ಯಾಯ ಮಂಡಳಿಯ ತೀರ್ಪನನ್ನು ನಿರೀಕ್ಷಿಸಲಾಗಿದೆ.

ಇ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಕೆಯಲ್ಲಿ ಲಭ್ಯವಿದ್ದ ಮಾಹಿತಿಯನ್ನು ಕಡತದಲ್ಲಿ ಸಚಿವ ಸಂಪುಟಕ್ಕೆ ನೀಡಲಾಗಿದ್ದು ಸಚಿವ ಸಂಪುಟದ ತೀರ್ಮಾನದಂತೆ 28 ಜನರ ಸೇವೆಯನ್ನು ಖಾಯಂಗೊಳಿಸಲು ವಿಶೇಷ ನಿಯಮಾವಳಿಯನ್ನು ರಚಿಸಲಾಗಿದ್ದು ನಿಯಮಾವಳಿಯ ಷರತ್ತುಗಳನ್ನುಪೂರೈಸಿದ 24 ಜನರ ಸೇವೆಯನ್ನು ಖಾಯಂಗೊಳಿಸಲಾಗಿದೆ.

ಪ್ರಶ್ನೆ ಸಂಖ್ಯೆ : 64 (82) ಶ್ರೀ ನರಸಿಂಹನಾಯಕ್ (ರಾಜೂಗೌಡ)

ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಸೂರಪುರ ತಾಲ್ಲೂಕಿನಲ್ಲಿ ಅನೇಕ ಪ್ರವಾಸಿ ತಾಣಗಳು ಹಾಗೂ ಪ್ರೇಕ್ಷಣಿಯ ಸ್ಥಳಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಈ ಪ್ರವಾಸಿ ತಾಣ ಹಾಗೂ ಪ್ರೇಕ್ಷಣೀಯ ಸ್ಥಳಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಬಿ.ಶ್ರೀರಾಮಲು

ಅ) ಹೌದು

ಆ) ಸುರಪುರ ತಾಲ್ಲೂಕಿನಲ್ಲಿ ಕೆಲವು ಚಾರಿತ್ರಕ ಸ್ಮಾರಕಗಳಿದ್ದು ಇಲ್ಲಿನ ನಾರಾಯಣಪುರದ ಬಳಿ ಛಾಯಾಭಗವತೀ ದೇವಾಲಯವು ಪ್ರಸಿದ್ಧವಾಗಿದೆ.